**ಕರ್ನಾಟಕ ಸರ್ಕಾರ**

ಸಂಖ್ಯೆ:ಪಪೂಶಿಇ/ವಿದ್ಯಾ.ವೇ/ಶಾ/ಸೇ:ಮಾ.ಸಂ.ಅ.ಸ.ವಿ.ವೇ.2018.F.B./2018–19

ನಿರ್ದೇಶಕರ ಕಛೇರಿ,
ಪದವಿ ಪೂರ್ವ ಶಿಕ್ಷಣ ಇಲಾಖೆ,
18ನೇ ಕ್ರಾಸ್, ಸಂಪಿಗೆ ರಸ್ತೆ,
ಮಲ್ಲೇಶ್ವರಂ, ಬೆಂಗಳೂರು-12.
ದಿನಾಂಕ: **–06–2018.**
02-07-2018

## ಪ್ರಕಟಣೆ

ಕೇಂದ್ರ ಮಾನವ ಸಂಪನ್ಮೂಲ ಅಭಿವೃದ್ಧಿ ಮಂತ್ರಾಲಯ (M.H.R.D), ಉನ್ನತ ಶಿಕ್ಷಣ ಇಲಾಖೆ, ಕೇಂದ್ರ ಸರ್ಕಾರ, ನವದೆಹಲಿ ಇವರ ವತಿಯಿಂದ ಮಾರ್ಚ್/ಏಪ್ರಿಲ್ 2018ರಲ್ಲಿ ನಡೆದ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಸಂಯೋಜಿತವಾಗಿ **Top 20th Percentile or 80th** Percentileಗಿಂತ ಹೆಚ್ಚು ಅಂಕಗಳಿಸಿದ ಹಾಗೂ ತಮ್ಮ ವಿದ್ಯಾಭ್ಯಾಸವನ್ನು ಕಡ್ಡಾಯವಾಗಿ ಉನ್ನತ ಶಿಕ್ಷಣದಲ್ಲಿ ಮುಂದುವರಿಸಿರುವಂತಹ(ಕನಿಷ್ಠ 03 ವರ್ಷದ ಪದವಿ ತರಗತಿಗೆ ದಾಖಲಾಗಿರುವ) ವಿದ್ಯಾರ್ಥಿಗಳಿಂದ **Central Sector Scheme of Scholorship** for College and University Studentsಗಳಿಗೆonline ಮೂಲಕ ಅರ್ಜಿ ಸಲ್ಲಿಸುವಂತೆ ಸೂಚಿಸಲಾಗಿರುತ್ತದೆ. ಈ ಸಂಬಂಧವಾಗಿ ಕೇಂದ್ರ ಸರ್ಕಾರದ ವತಿಯಿಂದ **website:www.scholarships.gov.in**ನ National e-Scholarship Portalನಲ್ಲಿ ಹೊಸ ತಂತ್ರಾಂಶವನ್ನು ಅಳವಡಿಸಲಾಗಿರುತ್ತದೆ. ಆದಕಾರಣ, ಈ portalನಲ್ಲಿಯೇ**2018ರFresh Batch**ನವಿದ್ಯಾರ್ಥಿಗಳು ಅರ್ಜಿಗಳನ್ನು **"online"**ಮೂಲಕ ಸಲ್ಲಿಸಬೇಕಿರುತ್ತದೆ.(Link for submission of **application – website:www.scholarships.gov.in=»New User(Register).** ಪ್ರಸ್ತುತ ಸದರಿ ಪೋರ್ಟಲ್‌ನಲ್ಲಿ ಹೊಸ ಬ್ಯಾಚ್‌ನ ಕಾರ್ಯ ಜಾರಿಯಲ್ಲಿದ್ದು,ಶೀಘ್ರದಲ್ಲಿಯೇ ಪೂರ್ಣಗೊಳ್ಳಲಿರುತ್ತದೆ. ಆಸಕ್ತ ವಿದ್ಯಾರ್ಥಿಗಳು ಆಗಾಗ ಈ ವೆಬ್‌ಸೈಟನ್ನು ಗಮನಿಸುತ್ತಿದ್ದು, ಪ್ರಕ್ರಿಯೆ ಆರಂಭಗೊಂಡ ಕೂಡಲೇ ಕೇಂದ್ರ ಸರ್ಕಾರದ ವತಿಯಿಂದ ನಿಗದಿ ಪಡಿಸುವ ದಿನಾಂಕದೊಳಗಾಗಿ **"online"**ಮೂಲಕ ಅರ್ಜಿಯನ್ನು ಸಲ್ಲಿಸಬಹುದಾಗಿರುತ್ತದೆ.

ಹಾಗೂ 2018ನೇ ಸಾಲಿನಲ್ಲಿ ಎಂ.ಹೆಚ್.ಆರ್.ಡಿ. ವಿದ್ಯಾರ್ಥಿ ವೇತನಕ್ಕೆ (ಹೊಸ ಹಾಗೂ ನವೀಕರಣಗಳಿಗೆ) ಅರ್ಜಿ ಸಲ್ಲಿಸಲಿಚ್ಛಿಸುವ ವಿದ್ಯಾರ್ಥಿಗಳು ಕಡ್ಡಾಯವಾಗಿ ಆಧಾರ್ ನೋಂದಣಿ ಸಂಖ್ಯೆಯನ್ನು ಬ್ಯಾಂಕ್ ಖಾತೆಗೆ ಲಿಂಕ್ ಮಾಡಬೇಕಿರುತ್ತದೆ. ಆದಕಾರಣ, ಆಸಕ್ತ ವಿದ್ಯಾರ್ಥಿಗಳು ಆಧಾರ್ ನೋಂದಣಿ ಸಂಖ್ಯೆಯನ್ನು ಕಡ್ಡಾಯವಾಗಿ ಹೊಂದಿರಬೇಕಾಗಿ ಈ ಮೂಲಕ ತಿಳಿಸಿದೆ.

ವಿದ್ಯಾರ್ಥಿಗಳು **"online"**ಮೂಲಕಸಲ್ಲಿಸಿದ ಎಲ್ಲಾ ದಾಖಲೆಗಳನ್ನು (ಮೂಲ ದಾಖಲೆಗಳ ಜೊತೆಯಲ್ಲಿ) ಪರಿಶೀಲನೆಗಾಗಿ ತಾವು ಅಧ್ಯಯನ ಮಾಡುತ್ತಿರುವ ಕಾಲೇಜುಗಳ ಪ್ರಾಚಾರ್ಯರುಗಳಿಗೆ ಕೇಂದ್ರ ಸರ್ಕಾರದಿಂದ ನಿಗದಿ ಪಡಿಸುವದಿನಾಂಕದೊಳಗಾಗಿ ಸಲ್ಲಿಸುವುದು.

ಪ್ರಾಚಾರ್ಯರುಗಳು, ವಿದ್ಯಾರ್ಥಿಗಳು **"online"**ಮೂಲಕ ಸಲ್ಲಿಸಿರುವ ಅರ್ಜಿಗಳನ್ನು **"online"**ನ್‌ಲ್ಲಿ ಕೂಲಂಕಷವಾಗಿ ಪರಿಶೀಲಿಸಿ, ಸದರಿ ವಿದ್ಯಾರ್ಥಿಯು ತಮ್ಮ ಕಾಲೇಜಿನಲ್ಲಿ ದಾಖಲಾಗಿ, ವಿದ್ಯಾಭ್ಯಾಸ ಮುಂದುವರಿಸಿರುವ ಬಗ್ಗೆ ಹಾಗೂ ವಿದ್ಯಾರ್ಥಿಯು ಈ ವಿದ್ಯಾರ್ಥಿ ವೇತನದ ಉದ್ದೇಶಕ್ಕಾಗಿ ಖಾತೆ ತೆರೆದಿರುವ ಬ್ಯಾಂಕ್‌ನ ವಿವರಗಳನ್ನು ಪರಿಶೀಲಿಸಿ ಖಚಿತ ಪಡಿಸಿಕೊಂಡು, ಸದರಿ ಮಾಹಿತಿಯನ್ನು **"online"**ಮೂಲಕವೇಕೇಂದ್ರ ಸರ್ಕಾರದ ವತಿಯಿಂದ ನಿಗದಿ ಪಡಿಸುವ ದಿನಾಂಕದೊಳಗಾಗಿ ಇಲಾಖೆಗೆ ಸಲ್ಲಿಸಲು( **Forward** ಮಾಡಲು) ಕೋರಿದೆ. ಯಾವುದೇ ಕಾರಣಕ್ಕೂ ನೈಜ ವಿದ್ಯಾರ್ಥಿಯ ಹೊರತು ಆಯ್ಕೆಯಾಗದ ವಿದ್ಯಾರ್ಥಿಗೆ ವಿದ್ಯಾರ್ಥಿ ವೇತನ ಜಮೆಯಾಗದಂತೆ ನೋಡಿಕೊಳ್ಳುವ ಜವಾಬ್ದಾರಿ ಪ್ರಾಚಾರ್ಯರದ್ದಾಗಿರುತ್ತದೆ. ಈ ಸಂಬಂಧ ಹೆಚ್ಚಿನ ಮಾಹಿತಿಗೆ ಕೇಂದ್ರ ಕಛೇರಿಯ ಎಂ.ಹೆಚ್.ಆರ್.ಡಿ. ವಿದ್ಯಾರ್ಥಿ ವೇತನದ ಶಾಖೆಯನ್ನು ಸಂಪರ್ಕಿಸಲು ಕೋರಿದೆ. ಪ್ರಸ್ತುತ **National e-Scholarship Portal**ನಲ್ಲಿ ವಿದ್ಯಾರ್ಥಿ ವೇತನದ ನಿಮಿತ್ತ ಕಾರ್ಯ ನಡೆಯುತ್ತಿರುವ ಕಾರಣ ಹೆಚ್ಚಿನ ಮಾಹಿತಿಯು ಲಭ್ಯವಿರುವುದಿಲ್ಲ.ಪ್ರಕ್ರಿಯೆ ಚಾಲನೆಗೊಂಡ ಕೂಡಲೇ ಸದರಿ ವಿದ್ಯಾರ್ಥಿ ವೇತನದ ಕುರಿತು ಹೆಚ್ಚಿನ ಮಾಹಿತಿ ಲಭ್ಯವಾದಲ್ಲಿ ಇಲಾಖಾ ಅಂತರ್ಜಾಲದಲ್ಲಿ ಅಳವಡಿಸಲಾಗುವುದು.

ಪದವಿ ಪೂರ್ವ ಶಿಕ್ಷಣ ಇಲಾಖೆಯ **Website:http://pue.kar.nic.in=» Scholarship =» MHRD Scholarship =» MHRD Scholarship 2018-Fresh batch**ನಿಂದ ಮಾಹಿತಿಯನ್ನು ಪಡೆದುಕೊಳ್ಳಬಹುದಾಗಿರುತ್ತದೆ.

ನಿರ್ದೇಶಕರು,
ಪದವಿ ಪೂರ್ವ ಶಿಕ್ಷಣ ಇಲಾಖೆ.